# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಪ್ರಕಾಶ್ ಕೆ. ರಾಥೋಡ್ ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

***

**ವಿಷಯ:** ಈಗಿರುವ ಪಂಚಾಯತ್ ರಾಜ್ ಕಾನೂನನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ ಸಂವಿಧಾನದ ಅಮೃತ ಮಹೋತ್ಸವ ಆಚರಿಸುವ ಈ ಪ್ರಸಂಗದಲ್ಲಿ ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸಾಗಿಸಲು ಗ್ರಾಮ ಪಂಚಾಯತಿಗಳು ಗ್ರಾಮ ಸರ್ಕಾರಗಳಾಗಿ, ತಾಲ್ಲೂಕು ಪಂಚಾಯತಿಗಳು ತಾಲ್ಲೂಕು ಸರ್ಕಾರಗಳಾಗಿ, ಜಿಲ್ಲಾ ಪಂಚಾಯತಿಗಳು ಜಿಲ್ಲಾ ಸರ್ಕಾರಗಳಾಗಿ, ಜವಾಬ್ದಾರಿ ನಿರ್ವಹಿಸಲು ಎಲ್ಲಾ ಅಧಿಕಾರ, ಹಣಕಾಸು ಮತ್ತು ಅಧಿಕಾರಿಗಳನ್ನು ಹಸ್ತಾಂತರಗೊಳಿಸಿ ಸಂವಿಧಾನದ ಆಶಯಗಳನ್ನು ಈಡೇರಿಸುವ ಬಗ್ಗೆ.

**ಉತ್ತರ:** ಅಧಿಕಾರ ವಿಕೇಂದ್ರಿಕರಣ ತತ್ವದಡಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರ ವಿಕೇಂದ್ರಿಕರಣಗೊಳಿಸುವ ಉದ್ದೇಶದಿಂದ ಸಂವಿಧಾನದ 73 ನೇ ತಿದ್ದುಪಡಿ ಅನುಸಾರ ರಾಜ್ಯದಲ್ಲಿ **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಅನ್ನು ದಿನಾಂಕ: 10-05-1993 ರಿಂದ ಜಾರಿಗೊಳಿಸಲಾಗಿರುತ್ತದೆ. ಈಅಧಿನಿಯಮದನ್ವಯ ರಚಿಸಲಾಗಿರುವ ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಸ್ಥಳೀಯ ಸ್ವಯಂ ಆಡಳಿತ ಸಂಸ್ಥೆಗಳಾಗಿ ಕಾರ್ಯನಿರ್ವಹಿಸಬೇಕೆಂಬುದು ಅಧಿನಿಯಮದ ಆಶಯವಾಗಿರುತ್ತದೆ.**

## ಪ್ರಕಾರ್ಯಗಳು: (FUNCTIONS)

**ಭಾರತ ಸಂವಿಧಾನದ ಅನುಚ್ಛೇದ 243G ರನ್ವಯ 11ನೇ ಅನುಸೂಚಿಯಡಿ 29 ವಿಷಯಗಳನ್ನು ಪಂಚಾಯತ ರಾಜ್ ಸಂಸ್ಥೆಗಳಿಗೆ ವರ್ಗಾಯಿಸಲಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ಮತ್ತು ಅನುಸೂಚಿ-I ರಲ್ಲಿ ಗ್ರಾಮ ಪಂಚಾಯತಿಯ ಪ್ರಕಾರ್ಯಗಳು, ಪ್ರಕರಣ 145 ಮತ್ತು ಅನುಸೂಚಿ-II ರಲ್ಲಿ ತಾಲ್ಲೂಕು ಪಂಚಾಯತಿಯ ಪ್ರಕಾರ್ಯಗಳು, ಮತ್ತು ಪ್ರಕರಣ 184 ಮತ್ತು ಅನುಸೂಚಿ-III ರಡಿ ಜಿಲ್ಲಾ ಪಂಚಾಯತಿಯ ಪ್ರಕಾರ್ಯಗಳನ್ನು ನಿರ್ದಿಷ್ಟ ಪಡಿಸಲಾಗಿದೆ.**

**ಈ ಹಿನ್ನೆಲೆಯಲ್ಲಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿನಿಯಮದಡಿ ಹೆಚ್ಚಿನ ಪ್ರಕಾರ್ಯಗಳನ್ನು ವಹಿಸಲಾಗಿದೆ. ಗ್ರಾಮಾಂತರ ಪ್ರದೇಶದ ಜನರ ಜೀವನ ಮಟ್ಟವನ್ನು ಸುಧಾರಿಸಲು ಹಾಗೂ ಅವರ ದೈನಂದಿನ ಜೀವನಕ್ಕೆ ಬೇಕಾದ ಸೌಕರ್ಯಗಳನ್ನು ಕಲ್ಪಿಸಲು ಗ್ರಾಮ ಪಂಚಾಯತಿಗಳಿಗೆ ಅಧಿಕಾರ ನೀಡಲಾಗಿದೆ. ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯ ಜನರ ಭಾಗವಹಿಸುವಿಕೆ ಮೂಲಕ ಯೋಜನೆಗಳನ್ನು ರೂಪಿಸಲು ಹಾಗೂ ಅವುಗಳನ್ನು ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಈ ಉದ್ದೇಶಕ್ಕಾಗಿ ಗ್ರಾಮ ಸ್ವರಾಜ್ ಘಟಕಗಳಾದ ಗ್ರಾಮ ಸಭೆ, ವಾರ್ಡ್ ಸಭೆ ಹಾಗೂ ಜನವಸತಿ ಸಭೆಗಳಿಗೆ ಹೆಚ್ಚಿನ ಅಧಿಕಾರ ನೀಡಲಾಗಿದೆ.**

ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆ / ಕಾರ್ಯಕ್ರಮಗಳಾದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ, 15ನೇ ಹಣಕಾಸು ಯೋಜನೆ, ಜಲಜೀವನ್ ಮಿಷನ್, ಸ್ವಚ್ಛ ಭಾರತ ಅಭಿಯಾನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಗ್ರಾಮೀಣ ಜನತೆಗೆ ವಿವಿಧ ಇಲಾಖೆಗಳ ಸೇವೆಗಳ ದಾಖಲೆಗಳನ್ನು ತ್ವರಿತವಾಗಿ ಮತ್ತು ಸಮೀಪವಾಗಿ ಒಂದೇ ಸೂರಿನಡಿ ಕಲ್ಪಿಸುವ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ವಿವಿಧ ಇಲಾಖೆಗಳ ಸೇವೆಗಳೊಂದಿಗೆ ಆಧಾರ್ ಸೇವೆಗಳನ್ನು ಒದಗಿಸಲು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಬಾಪೂಜಿ ಸೇವಾ ಕೇಂದ್ರಗಳನ್ನು ಸ್ಥಾಪಿಸಿ 72 ಸೇವೆಗಳನ್ನು ನೀಡಲಾಗುತ್ತಿದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಾಗರೀಕರಿಗೆ ನೀಡುವ ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲಾಗಿದೆ.

ಪಂಚಾಯತ್ ರಾಜ್ ಸಂಸ್ಥೆಗಳು ಪಂಚಾಯತ್ ನೀತಿ ನಿರ್ದೇಶಕ ತತ್ವಗಳನ್ನು ಪ್ರೋತ್ಸಾಹಿಸಲು ಅವಕಾಶ ಕಲ್ಪಿಸಲಾಗಿದೆ.ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ನಿರ್ದಿಷ್ಟಪಡಿಸಲಾಗಿದೆ.

**ಗ್ರಾಮ ಪಂಚಾಯತಿಯು ಅಭಿವೃದ್ಧಿ ಕಾರ್ಯಕ್ರಮಗಳನ್ನು ಗಮನದಲ್ಲಿಟ್ಟುಕೊಂಡು ಪ್ರತಿ ವರ್ಷವೂ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿಗಳು ಅಭಿವೃದ್ಧಿ ಆಧಾರದ ಮೇಲೆ ಪಂಚಾಯತಿ ಪೂರ್ಣ ಅವಧಿಗಾಗಿ ದೂರ ದೃಷ್ಟಿ ಯೋಜನೆಯನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿಗಳು ಯೋಜನೆಗಳನ್ನು ಸಿದ್ಧಪಡಿಸಲು ಅವಕಾಶ ಕಲ್ಪಿಸಲಾಗಿದೆ.**

**ತಾಲ್ಲೂಕು ಮಟ್ಟದಲ್ಲಿ ಯೋಜನೆಯ ಸಂಯೋಜನೆಯನ್ನು ಕೈಗೊಳ್ಳುವ ಉದ್ದೇಶಕ್ಕಾಗಿ, ತಾಲ್ಲೂಕು ಯೋಜನೆ ಮತ್ತು ಅಭಿವೃದ್ಧಿ ಸಮಿತಿಯನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ.ಜಿಲ್ಲಾ ಪಂಚಾಯತಿಗಳು ಜಿಲ್ಲೆಗಾಗಿ ಒಂದು ಅಭಿವೃದ್ಧಿ ಯೋಜನೆಯನ್ನು ತಯಾರಿಸಲು ಜಿಲ್ಲಾ ಯೋಜನಾ ಸಮಿತಿಯನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ.**

ಗ್ರಾಮ ಪಂಚಾಯತಿ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಮಾಡಲು (ಕೆ.ಡಿ.ಪಿ.) ಗ್ರಾಮ ಪಂಚಾಯತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ಸಭೆ ನಡೆಸಲಾಗುತ್ತಿದೆ.ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ಮಾಡಲು ಸಭೆ ನಡೆಸಲು ಅವಕಾಶ ಕಲ್ಪಿಸಲಾಗಿದೆ.

**ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 286 ರಂತೆ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಸದಸ್ಯರು ಮತ್ತು ಅಧಿಕಾರಿಗಳು ಹಾಗೂ ನೌಕರರನ್ನು ಭಾರತದಂಡ ಸಂಹಿತೆಯ 21 ನೇ ಪ್ರಕರಣ ಮತ್ತು ಭ್ರಷ್ಟಾಚಾರ ನಿವಾರಣಾ ಅಧಿನಿಯಮ, 1988 ರ ಅರ್ಥ ವ್ಯಾಪ್ತಿಯಲ್ಲಿ ಲೋಕ ನೌಕರರೆಂದು ಪರಿಗಣಿಸಲಾಗಿದೆ.**

**ರಾಜ್ಯದಲ್ಲಿ ಗ್ರಾಮ ಪಂಚಾಯಿತಿಗಳ ಕಾರ್ಯನಿರ್ವಹಣೆಯನ್ನು ಪ್ರೋತ್ಸಾಹಿಸಲು ಉತ್ತಮ ಆಡಳಿತ ಮತ್ತು ಆರ್ಥಿಕ ಸಾಧನೆ ಮಾಡಿರುವ ಗ್ರಾಮ ಪಂಚಾಯಿತಿಗಳನ್ನು ಗುರುತಿಸಿ ಅವುಗಳಿಗೆ ರೂ.5.00 ಲಕ್ಷಗಳ ಪ್ರೋತ್ಸಾಹ ಧನವನ್ನು ಗಾಂಧಿ ಗ್ರಾಮ ಪುರಸ್ಕಾರ ಯೋಜನೆಯಡಿ ಬಿಡುಗಡೆ ಮಾಡಲಾಗುತ್ತಿದೆ.**

**ಗ್ರಾಮ ಪಂಚಾಯತಿ ಆರೋಗ್ಯ ಅಮೃತ ಅಭಿಯಾನ ಯೋಜನೆಯನ್ನು ಗ್ರಾಮ ಆರೋಗ್ಯ ಎಂಬ ನಾಮ ಶೀರ್ಷಿಕೆಯಡಿಯಲ್ಲಿ ಆರೋಗ್ಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮಹಿಳಾ ಗ್ರಾಮ ಸಭೆ, ಮಕ್ಕಳ ಸ್ನೇಹಿ ಗ್ರಾಮ ಪಂಚಾಯತಿ ಅಭಿಯಾನ ಮತ್ತು ಮಕ್ಕಳ ಗ್ರಾಮ ಸಭೆ ನಡೆಸಲಾಗುತ್ತಿದೆ.**

**ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಸದಸ್ಯರು, ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಚುನಾವಣೆಗಳಲ್ಲಿ ಮಹಿಳೆಯರಿಗೆ ಶೇ.50 ರಷ್ಟು ಮೀಸಲಾತಿ ಕಲ್ಪಿಸಲಾಗಿದೆ. ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಅಧ್ಯಕ್ಷರು ಕಾರ್ಯನಿರ್ವಾಹಕ ಮುಖ್ಯಸ್ಥರಾಗಿರುತ್ತಾರೆ.**

**ಗ್ರಾಮ ಪಂಚಾಯತಿ ಗ್ರಂಥಾಲಯಗಳನ್ನು ಡಿಜಿಟಲ್ ಗ್ರಂಥಾಲಯಗಳನ್ನಾಗಿ ಪರಿವರ್ತಿಸಲಾಗಿದ್ದು, "ಓದುವ ಬೆಳಕು" ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು 'ಬಾಲ್ಯವನ್ನು ಆನಂದಿಸಿ, ಬೆಳೆಯುತ್ತಾ ಸಾಗಿ' ಅಭಿಯಾನವನ್ನು ಆಯೋಜಿಸಲಾಗುತ್ತಿದೆ. ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಅರಿವು ಕೇಂದ್ರಗಳನ್ನಾಗಿಸಿ ಗ್ರಂಥಾಲಯ ಸಮಯವನ್ನು 6 ಗಂಟೆಯಿಂದ 8 ಗಂಟೆಗೆ ಹೆಚ್ಚಿಸಲಾಗಿದೆ.**

**ನರೇಗಾ ಯೋಜನೆ ಉದ್ಯೋಗಗಳಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸ ಮಾಡುತ್ತಿರುವ ರಾಜ್ಯದ ಆಯ್ದ ನಾಲ್ಕು ಸಾವಿರ ಗ್ರಾಮ ಪಂಚಾಯಿತಿಗಳಲ್ಲಿ "ಕೂಸಿನ ಮನೆ" ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.**

ಗ್ರಾಮ ಪಂಚಾಯತಿ ಸದಸ್ಯರುಗಳಿಗೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ವತಿಯಿಂದ 2021 ರಲ್ಲಿ 5 ದಿನಗಳ ತರಬೇತಿ ಮತ್ತು 2022 ರಲ್ಲಿ ದೂರದೃಷ್ಟಿ ಯೋಜನೆಯ ಬಗ್ಗೆ 3 ದಿನಗಳ ತರಬೇತಿ ನೀಡಲಾಗಿದೆ. ಪ್ರಸ್ತುತ ಮಹಿಳಾ ಚುನಾಯಿತ ಪ್ರತಿನಿಧಿಗಳಿಗೆ ತರಬೇತಿ ನೀಡಲಾಗುತ್ತಿದೆ.

ಮಾನ್ಯ ಮುಖ್ಯಮಂತ್ರಿಗಳು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿ ಹೊಂದಿರಬಹುದಾದ ಕಾರ್ಯ ಹಂಚಿಕೆಯ ಜವಾಬ್ದಾರಿ ನಕ್ಷೆಯನ್ನು ನಿರ್ದಿಷ್ಟಪಡಿಸಲು ಕ್ರಮ ವಹಿಸಲಾಗುತ್ತಿದೆ.**

## <u>ಅನುದಾನ (Funds):</u>

**ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಆರ್ಥಿಕವಾಗಿ ಸಧೃಢವಾಗಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಣಕಾಸು ಆಯೋಗಗಳ ಶಿಫಾರಸ್ಸಿನನ್ವಯ ಅನುದಾನ ನೀಡಲಾಗುತ್ತಿದೆ.**

**ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಗ್ರಾಮ ಪಂಚಾಯತಿಗಳಿಗೆ ವಾರ್ಷಿಕವಾಗಿ ಸರಾಸರಿ ಶಾಸನಬದ್ಧ ಅನುದಾನವಾಗಿ ರೂ:20.00 ಲಕ್ಷಗಳ ಅನುದಾನ ನೀಡಲಾಗುತ್ತಿದೆ.**

**ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯಿತಿಯಲ್ಲಿನ ಕಾರ್ಮಿಕ ಆಯವ್ಯಯ ಆಧರಿಸಿ ಅನುದಾನ ನೀಡಲಾಗುತ್ತಿದೆ.**

**ಕೇಂದ್ರ 15ನೇ ಹಣಕಾಸು ಆಯೋಗದ ಅನುದಾನವನ್ನು ಶೇ.90ರಷ್ಟು ಜನಸಂಖ್ಯೆ ಮತ್ತು ಶೇ.10ರಷ್ಟು ಭೌಗೋಳಿಕ ಪ್ರದೇಶದ ಆಧಾರದ ಮೇಲೆ ಬಿಡುಗಡೆಗೊಳಿಸಲಾಗುತ್ತಿದ್ದು, ಪ್ರತಿ ಗ್ರಾಮ ಪಂಚಾಯತಿಗೆ ಸರಾಸರಿ ರೂ:15 ಲಕ್ಷಗಳು, ತಾಲ್ಲೂಕು ಪಂಚಾಯತಿಗಳಿಗೆ ಸರಾಸರಿ ರೂ:11 ಲಕ್ಷಗಳು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಸರಾಸರಿ ರೂ:1.50ಕೋಟಿಗಳ ಅನುದಾನ ನೀಡಲಾಗುತ್ತಿದೆ.**

**ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯತಿಗಳಿಗೆ ಅಭಿವೃದ್ಧಿ ಅನುದಾನವನ್ನುಶೇ.80ರಷ್ಟು ಜನಸಂಖ್ಯೆ ಮತ್ತು ಶೇ.20ರಷ್ಟು ಭೌಗೋಳಿಕ ಪ್ರದೇಶದ ಆಧಾರದ ಮೇಲೆ ಬಿಡುಗಡೆಗೊಳಿಸಲಾಗುತ್ತಿದ್ದು, ಪ್ರತಿ ತಾಲ್ಲೂಕು ಪಂಚಾಯತಿಗೆ ಸರಾಸರಿ ರೂ:2.00 ಕೋಟಿಗಳು ಮತ್ತು ಜಿಲ್ಲಾ ಪಂಚಾಯತಿಗಳಿಗೆ ಸರಾಸರಿ ರೂ:4.00 ಕೋಟಿಗಳ ಅನುದಾನ ನೀಡಲಾಗುತ್ತಿದೆ.**

ಗ್ರಾಮ ಪಂಚಾಯತಿಗಳ ಭೂಮಿ ಮತ್ತು ಕಟ್ಟಡಗಳ ಮೇಲೆ ಮತ್ತು ನೀರಿನ ಮೇಲೆ ತೆರಿಗೆ ವಿಧಿಸಿ ಸಂಪನ್ಮೂಲ ಕ್ರೋಢೀಕರಿಸಲು ಅವಕಾಶ ಕಲ್ಪಿಸಲಾಗಿದೆ.

ಗ್ರಾಮ ಪಂಚಾಯತಿಗಳಲ್ಲಿ ತೆರಿಗೆ ವಸೂಲಾತಿಯ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತರುವ ನಿಟ್ಟಿನಲ್ಲಿ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಡಿಜಿಟಲ್ ಪಾವತಿಗಳನ್ನು ಉತ್ತೇಜಿಸುವ ಸಲುವಾಗಿ ತೆರಿಗೆ, ದರ ಮತ್ತು ಇತರ ಫೀಜುಗಳನ್ನು ವಸೂಲಾತಿ ಮಾಡಲು ಪ್ರತಿ ಗ್ರಾಮ ಪಂಚಾಯತಿಗೆ ಒಂದರಂತೆ Android Pos Machine ಗಳನ್ನು ಒದಗಿಸಲಾಗಿದೆ.

ಗ್ರಾಮ ಪಂಚಾಯತಿ ಅಧ್ಯಕ್ಷರಿಗೆ ರೂ.6000/- ಗಳು, ಉಪಾಧ್ಯಕ್ಷರಿಗೆ ರೂ.4000/- ಗಳು ಮತ್ತು ಸದಸ್ಯರಿಗೆ ರೂ.2000/- ಗೌರವಧನ ಮತ್ತು ಉಪವೇಶನ ಶುಲ್ಕ ರೂ.300/- ಗಳನ್ನು ನೀಡಲಾಗುತ್ತಿದೆ. ತಾಲ್ಲೂಕು ಪಂಚಾಯತಿ ಅಧ್ಯಕ್ಷರಿಗೆ ರೂ.6000/- ಗಳು, ಉಪಾಧ್ಯಕ್ಷರಿಗೆ ರೂ.4000/- ಗಳು ಮತ್ತು ಸದಸ್ಯರಿಗೆ ರೂ.3000/- ಗೌರವಧನ ಮತ್ತು ಉಪವೇಶನ ಶುಲ್ಕ ರೂ.150/- ಗಳನ್ನು ನೀಡಲಾಗುತ್ತಿದೆ.

ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರೂ.35000/- ಗಳು, ಉಪಾಧ್ಯಕ್ಷರಿಗೆ ರೂ.15000/- ಗಳು ಮತ್ತು ಸದಸ್ಯರಿಗೆ ರೂ.5000/- ಗೌರವಧನ ಮತ್ತು ಉಪವೇಶನ ಶುಲ್ಕ ರೂ.200/- ಗಳನ್ನು ನೀಡಲಾಗುತ್ತಿದೆ. ಜಿಲ್ಲಾ ಪಂಚಾಯತಿ ಅಧ್ಯಕ್ಷರಿಗೆ ರಾಜ್ಯ ಸಚಿವರ ಸ್ಥಾನಮಾನವನ್ನು ನೀಡಲಾಗಿದೆ. ಅಧ್ಯಕ್ಷರಿಗೆ ವೇತನ ಮತ್ತು ಭತ್ಯೆಗಳನ್ನು ನಿಯಮಾನುಸಾರ ಭರಿಸಲು ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತುತ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಹಣಕಾಸು ಪರಿಸ್ಥಿತಿಗಳನ್ನು ಪರಾಮರ್ಶಿಸಲು ಶ್ರೀ ಸಿ.ನಾರಾಯಣಸ್ವಾಮಿರವರ ಅಧ್ಯಕ್ಷತೆಯಲ್ಲಿ 5ನೇ ರಾಜ್ಯ ಹಣಕಾಸು ಆಯೋಗವನ್ನು ಸ್ಥಾಪಿಸಲಾಗಿದೆ.

## FUNCTIONARY (ಆಡಳಿತ – ಮಾನವ ಸಂಪನ್ಮೂಲ)

ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿರಾಜ್ಯ ಸಿವಿಲ್ ಸೇವೆಗೆ ಸೇರಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1/ ಗ್ರೇಡ್-2 ಮತ್ತು ಹೆಚ್ಚಿನ ಆರ್ಥಿಕ ಮತ್ತು ಆಡಳಿತಾತ್ಮಕ ಜವಾಬ್ದಾರಿಯುಳ್ಳ ಗ್ರಾಮ ಪಂಚಾಯತಿಗಳಲ್ಲಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಗ್ರಾಮ ಪಂಚಾಯತಿಗಳ 1500 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ಗ್ರೂಪ್-ಬಿ ವೃಂದದ ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳೆಂದು ಉನ್ನತೀಕರಿಸಿ ಮರು ಪದನಾಮೀಕರಿಸಿ ಆದೇಶ ಹೊರಡಿಸಲಾಗಿದೆ.

ರಾಜ್ಯ ಸಿವಿಲ್ ಸೇವೆಗೆ ಸೇರಿದ ನೌಕರರ ಜೊತೆಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 112ರಡಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಮಂಜೂರಾಗಿರುವ 1) ಬಿಲ್ ಕಲೆಕ್ಟರ್, 2) ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, 3) ವಾಟರ್ ಆಪರೇಟರ್ 4) ಅಟೆಂಡೆಂಟ್ ಮತ್ತು 5) ಕ್ಲೀನರ್ಸ್ ವೃಂದದಲ್ಲಿ ನೌಕರರು ಗ್ರಾಮ ಪಂಚಾಯತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ತಾಲ್ಲೂಕು ಪಂಚಾಯತಿಗಳಲ್ಲಿ ಅಸಿಸ್ಟೆಂಟ್ ಕಮಿಷನರ್ ದರ್ಜೆಯ ಅಥವಾ ಅದಕ್ಕೆ ಸಮಾನವಾದ ರಾಜ್ಯ ಸರ್ಕಾರಿ ಸೇವೆಯ ಗ್ರೂಪ್-ಎ ಅಧಿಕಾರಿಯಾದ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ, ಗ್ರೂಪ್-ಬಿ ವೃಂದದ ಸಹಾಯಕ ನಿರ್ದೇಶಕರು (ಪಂಚಾಯತ್ ರಾಜ್/ ಗ್ರಾಮೀಣ ಉದ್ಯೋಗ) ಮತ್ತು ಅಧೀನ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಜಿಲ್ಲಾ ಪಂಚಾಯತಿಗಳಲ್ಲಿ ಡೆಪ್ಯುಟಿ ಕಮಿಷನರ್ ದರ್ಜೆಗೆ ಕಡಿಮೆಯಿಲ್ಲದ ಅಧಿಕಾರಿಯಾದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಉಪ ಕಾರ್ಯದರ್ಶಿಗಳು, ಮುಖ್ಯ ಯೋಜನಾಧಿಕಾರಿ, ಯೋಜನಾ ನಿರ್ದೇಶಕರು, ಮುಖ್ಯ ಲೆಕ್ಕಾಧಿಕಾರಿ, ಸಹಾಯಕ ನಿರ್ದೇಶಕರು (ಆಡಳಿತ) ಮತ್ತು ಅಧೀನ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿರುತ್ತಾರೆ.

ಸಂಖ್ಯೆ:RDPR 354 GPA 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು